ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ. 3618/2022

ಸಿ.ಡಬ್ಲ್ಯೂ -01
ಪಿ.ಡಬ್ಲ್ಯೂ-01

ಸಾಕ್ಷಿದಾರನ ಹೆಸರು :- ಬೋರೆಗೌಡ
ತಂದೆಯ ಹೆಸರು :- ಕೆಂಪಯ್ಯ
ವಯಸ್ಸು :- 33 ವರ್ಷ
ಉದ್ಯೋಗ :- ವ್ಯವಸಾಯ
ವಾಸ :- ಹೊಸದೊಡ್ಡಿ

**ಸಾಕ್ಷಿಗೆ ದಿಃ 14.01.2026 ರಂದು ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ಆರೋಪಿತರು ನನಗೆ ಗೊತ್ತು. ದಿಃ 08.12.2017 ರಂದು ಮದ್ಯಾಹ್ನ 12.15 ರಿಂದ 12.30ರ ಸಮಯದಲ್ಲಿ ಆರೋಪಿತರು ನಮ್ಮ ಮನೆಯ ಮುಂದೆ ಮುಂದಿನ ರಸ್ತೆಯಲ್ಲಿ ಮಣ್ಣು ಹಾಕಿರುವ ವಿಚಾರವನ್ನು ಕೇಳಿದಕ್ಕೆ ನನಗೆ ದೊಣ್ಣೆಯಿಂದ ನನ್ನ ತಲೆಯ ಮದ್ಯ ಭಾಗಕ್ಕೆ ಆರೋಪಿತರು ಹೊಡೆದಿರುತ್ತಾರೆ. ಆರೋಪಿತರ ಹತ್ತಿರ ಬಂದೂಕು ಇದ್ದು ನನಗೆ ಕೊಲೆ ಬೆದರಿಕೆ ಹಾಕುತ್ತಿರುತ್ತಾರೆ. ಚಾಸಾ 2 ಮತ್ತು 3 ಬಂದು ಜಗಳ ಬಿಡಿಸಿರುತ್ತಾರೆ. ನಂತರ ನಾನು ಹು.ದುರ್ಗ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದಿರುತ್ತೇನೆ. ಪ್ರಥಮ ಚಿಕಿತ್ಸೆ ಪಡೆದು ನಂತರ ಹು.ದುರ್ಗ ಪೋ. ಠಾಣೆಗೆ ಹೋಗಿ ದೂರನ್ನು ನೀಡಿರುತ್ತೇನೆ. ವೈದ್ಯರು ಹೆಚ್ಚಿನ ಚಿಕಿತ್ಸೆಗೆ ಶಿಫಾರಸ್ಸು ಮಾಡಿದ್ದು ನಾನು ನಂತರ ಎಸಿಗಿರಿ ಆಸ್ಪತ್ರೆಗೆ ದಿಃ 09.12.2017 ರಂದು ಹೋಗಿ ಚಿಕಿತ್ಸೆ ಪಡೆದಿರುತ್ತೇನೆಂದು ಹೇಳುತ್ತಾರೆ. ದೂರಿಗೆ ನನ್ನ ಸಹಿ ಇರುತ್ತದೆ ಅದನ್ನು ನಿ.ಪಿ 1 ಎಂದು ಸಹಿಯನ್ನು ನಿ.ಪಿ 1(ಎ) ಎಂದು ಗುರುತಿಸಲಾಯಿತು. ನನಗೆ ಹೊಡೆಯಲು ಉಪಯೋಗಿಸಿದ ದೊಣ್ಣೆಯನ್ನು ಗುರುತಿಸುತ್ತೇನೆ. ಅದನ್ನು ಮು. ಮಾ. 1 ಎಂದು ಗುರುತಿಸಲಾಯಿತು.

**ಆರೋಪಿತರ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋಡಿದ್ದು ನೀಡಲಾಯಿತು.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಕುಣಿಗಲ್